**1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಭದ್ರಾವತಿ**

**ಸಿಸಿ ಸಂಖ್ಯೆ: 1161/2024**

ಚಾ.ಸಾ–01, ಪ್ರಾ.ಸಾ–01

| | | |
|---|---|---|
| ಹೆಸರು | : | ಶ್ರೀಮತಿ ಗೀತಾ |
| ಗಂಡನ ಹೆಸರು | : | ಈಶನಾಯ್ಕ |
| ವಯಸ್ಸು | : | 37 |
| ವೃತ್ತಿ | : | ವ್ಯವಸಾಯ |
| ವಾಸ | : | ನೆಲ್ಲಿಸರ ಗ್ರಾಮ, ಭದ್ರಾವತಿ ತಾಲ್ಲೂಕು |

**ದಿನಾಂಕ 19.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಚಾಸಾ–2 ನನ್ನ ಗಂಡ. ಚಾಸಾ–3 ಮತ್ತು 4 ರವರು ನನ್ನ ಗಂಡನ ತಮ್ಮಂದಿರು. ಆರೋಪಿತರ ಪರಿಚಯವಿದೆ.

ಆರೋಪಿತರು ನನಗೆ, ನನ್ನ ಗಂಡ ಮತ್ತು ಚಾಸಾ–3 ರವರ ಜೊತೆ ಗಲಾಟೆ ಮಾಡಿಲ್ಲ. ನಮಗೆ ಕಬ್ಬಿಣದ ನೀರಿನ ಪೈಪಿನಿಂದ ಮತ್ತು ಕಲ್ಲಿನಿಂದ ಹಲ್ಲೆ ಮಾಡಿಲ್ಲ. ನಮಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. ನಮಗೆ ಕೊಲೆ ಬೆದರಿಕೆ ಹಾಕಿಲ್ಲ. ನನಗೆ ಅವಮಾನ ಪಡಿಸಿಲ್ಲ. ನಾನು ಪೊಲೀಸರಿಗೆ ದೂರು ಮತ್ತು ಮುಂದುವರೆದ ಹೇಳಿಕೆ ನೀಡಿಲ್ಲ. ನನ್ನ ಸಮಕ್ಷಮ ಪಂಚನಾಮ ಜರುಗಿಸಿಲ್ಲ ಮತ್ತು ಏನನ್ನು ಜಪ್ತು ಪಡಿಸಿಲ್ಲ.

ನನಗೆ ಈಗ ತೋರಿಸಿದ ದಾಖಲೆಗಳಲ್ಲಿ ನನ್ನ ಸಹಿಗಳು ಇದೆ. ಆ ದಾಖಲೆಗಳು ದೂರು ಮತ್ತು ಪಂಚನಾಮಗಳಾಗಿದ್ದು, ಅವುಗಳನ್ನು ಕ್ರಮವಾಗಿ ನಿಪಿ.1, ನಿ.ಪಿ.2 ಎಂದು ಮತ್ತು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.1(ಎ), ನಿಪಿ.2(ಎ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 27.03.2024 ರಂದು ಬೆಳಗ್ಗೆ 9.30 ಗಂಟೆ ಸಮಯದಲ್ಲಿ ನಮ್ಮ ಗ್ರಾಮದ ನಮ್ಮ ಮನೆಯ ಮುಂದೆ, ಆರೋಪಿತರು ನನ್ನ, ನನ್ನ ಗಂಡನ ಮತ್ತು ಚಾಸಾ-3 ರವರ ಜೊತೆ ಗಲಾಟೆ ಮಾಡಿ, ನಮಗೆ ಅವಾಚ್ಯ ಶಬ್ದಗಳಿಂದ ಬೈದು, 1 ನೇ ಆರೋಪಿತ ಕಬ್ಬಿಣದ ನೀರಿನ ಪೈಪಿನಿಂದ ನನ್ನ ಎಡಮುಂಗೈಗೆ ಹೊಡೆದು, 3 ನೇ ಆರೋಪಿತ ಕಲ್ಲಿನಿಂದ ಚಾಸಾ-3 ರವರ ಎಡಕಾಲಿಗೆ ಹೊಡೆದು, ಆರೋಪಿತರು ನನ್ನನ್ನು ಹಿಡಿದು ಎಳೆದಾಡಿ ಅವಮಾನ ಪಡಿಸಿ, ಆರೋಪಿತರು ತಮ್ಮ ಕೈಗಳಿಂದ ನನಗೆ, ನನ್ನ ಗಂಡನಿಗೆ ಮತ್ತು ಚಾಸಾ-3 ರವರ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಹಾಗಾಗಿ ನಿಪಿ-1 ರಂತೆ ದೂರನ್ನು ನಾನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಅದೇ ದಿನ ಮಧ್ಯಾಹ್ನ 2.30 ರಿಂದ 3.30 ಗಂಟೆ ಸಮಯದಲ್ಲಿ ಘಟನಾ ಸ್ಥಳದಲ್ಲಿ ಪೊಲೀಸರು ನಾನು ತೋರಿಸಿದ ಹಾಗೆ ಪಂಚನಾಮವನ್ನು ನಿಪಿ.2 ರಂತೆ ಚಾಸಾ-6 ಮತ್ತು 7 ರವರ ಸಮಕ್ಷಮ ಜರುಗಿಸಿ ಸದರಿ ಕಲ್ಲು ಮತ್ತು ಕಬ್ಬಿಣದ

ಪೈಪನ್ನು ಜಪ್ತು ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಆ ವೇಳಗೆ ಘಟನಾ ಸ್ಥಳದ ಭಾವಚಿತ್ರವನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 28.03.2024 ರಂದು ನಾನು ಘಟನೆಯ ಕುರಿತು ಪೊಲೀಸರಿಗೆ ಮುಂದುವರೆದ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅದನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.**

**(ಹನುಮಂತ ಜಿ.ಹೆಚ್.)**
**1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ**

**1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಭದ್ರಾವತಿ**

**ಸಿಸಿ ಸಂಖ್ಯೆ: 1161/2024**

ಚಾ.ಸಾ–02, ಪ್ರಾ.ಸಾ–02

| | | |
|---|---|---|
| ಹೆಸರು | : | ಈಶನಾಯ್ಕ |
| ತಂದೆಯ ಹೆಸರು | : | ಲೇಟ್ ನಾಗರಾಜ ನಾಯ್ಕ |
| ವಯಸ್ಸು | : | 41 |
| ವೃತ್ತಿ | : | ವ್ಯವಸಾಯ |
| ವಾಸ | : | ನೆಲ್ಲಿಸರ ಗ್ರಾಮ, ಭದ್ರಾವತಿ ತಾಲ್ಲೂಕು |

**ದಿನಾಂಕ 19.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಫ್ರಾಸಾ–1 ನನ್ನ ಹೆಂಡತಿ. ಚಾಸಾ–3 ಮತ್ತು 4 ರವರು ನನ್ನ ತಮ್ಮಂದಿರು. ಆರೋಪಿತರ ಪರಿಚಯವಿದೆ.

ಆರೋಪಿತರು ನನ್ನ, ನನ್ನ ಹೆಂಡತಿ ಮತ್ತು ಚಾಸಾ–3 ರವರ ಜೊತೆ ಗಲಾಟೆ ಮಾಡಿಲ್ಲ. ನಮಗೆ ಕಬ್ಬಿಣದ ನೀರಿನ ಪೈಪಿನಿಂದ ಮತ್ತು ಕಲ್ಲಿನಿಂದ ಹಲ್ಲೆ ಮಾಡಿಲ್ಲ. ನಮಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. ನಮಗೆ ಕೊಲೆ ಬೆದರಿಕೆ ಹಾಕಿಲ್ಲ. ನನ್ನ ಹೆಂಡತಿಗೆ ಅವಮಾನ ಪಡಿಸಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 27.03.2024 ರಂದು ಬೆಳಗ್ಗೆ 9.30 ಗಂಟೆ ಸಮಯದಲ್ಲಿ ನಮ್ಮ ಗ್ರಾಮದ ನಮ್ಮ ಮನೆಯ ಮುಂದೆ, ಆರೋಪಿತರು ನನ್ನ, ನನ್ನ ಹೆಂಡತಿ ಮತ್ತು

ಚಾಸಾ–3 ರವರ ಜೊತೆ ಗಲಾಟೆ ಮಾಡಿ, ನಮಗೆ ಅವಾಚ್ಯ ಶಬ್ದಗಳಿಂದ ಬೈದು, 1 ನೇ ಆರೋಪಿತ ಕಬ್ಬಿಣದ ನೀರಿನ ಪೈಪಿನಿಂದ ನನ್ನ ಹೆಂಡತಿಯ ಎಡಮುಂಗೈಗೆ ಹೊಡೆದು, 3 ನೇ ಆರೋಪಿತ ಕಲ್ಲಿನಿಂದ ಚಾಸಾ–3 ರವರ ಎಡಕಾಲಿಗೆ ಹೊಡೆದು, ಆರೋಪಿತರು ನನ್ನ ಹೆಂಡತಿಯನ್ನು ಹಿಡಿದು ಎಳೆದಾಡಿ ಅವಮಾನ ಪಡಿಸಿ, ಆರೋಪಿತರು ತಮ್ಮ ಕೈಗಳಿಂದ ನನಗೆ, ನನ್ನ ಹೆಂಡತಿಗೆ ಮತ್ತು ಚಾಸಾ–3 ರವರ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 28.03.2024 ರಂದು ನಾನು ಘಟನೆಯ ಕುರಿತು ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅದನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ.4 ಎಂದು ಗುರುತಿಸಲಾಯಿತು.

ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.**

**(ಹನುಮಂತ ಜಿ.ಹೆಚ್.)**
**1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ**

**1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಭದ್ರಾವತಿ**

**ಸಿಸಿ ಸಂಖ್ಯೆ: 1161/2024**

ಚಾ.ಸಾ–03, ಫ್ರಾ.ಸಾ–03

| | | |
|---|---|---|
| ಹೆಸರು | : | ವಾಸು |
| ತಂದೆಯ ಹೆಸರು | : | ಲೇಟ್ ನಾಗರಾಜ ನಾಯ್ಕ |
| ವಯಸ್ಸು | : | 39 |
| ವೃತ್ತಿ | : | ವ್ಯವಸಾಯ |
| ವಾಸ | : | ನೆಲ್ಲಿಸರ ಗ್ರಾಮ, ಭದ್ರಾವತಿ ತಾಲ್ಲೂಕು |

**ದಿನಾಂಕ 19.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಫ್ರಾಸಾ–1 ನನ್ನ ಅತ್ತಿಗೆ. ಫ್ರಾಸಾ–2 ನನ್ನ ಅಣ್ಣ. ಚಾಸಾ–4 ರವರು ನಮ್ಮ ಗ್ರಾಮದವರು. ಆರೋಪಿತರ ಪರಿಚಯವಿದೆ.

ಆರೋಪಿತರು ನನ್ನ, ನನ್ನ ಅತ್ತಿಗೆ ಮತ್ತು ಅಣ್ಣನ ಜೊತೆ ಗಲಾಟೆ ಮಾಡಿಲ್ಲ. ನಮಗೆ ಕಬ್ಬಿಣದ ನೀರಿನ ಪೈಪಿನಿಂದ ಮತ್ತು ಕಲ್ಲಿನಿಂದ ಹಲ್ಲೆ ಮಾಡಿಲ್ಲ. ನಮಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. ನಮಗೆ ಕೊಲೆ ಬೆದರಿಕೆ ಹಾಕಿಲ್ಲ. ನನ್ನ ಅತ್ತಿಗೆಗೆ ಅವಮಾನ ಪಡಿಸಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 27.03.2024 ರಂದು ಬೆಳಗ್ಗೆ 9.30 ಗಂಟೆ ಸಮಯದಲ್ಲಿ ನಮ್ಮ ಗ್ರಾಮದ ನಮ್ಮ ಮನೆಯ ಮುಂದೆ, ಆರೋಪಿತರು ನನ್ನ, ನನ್ನ ಅತ್ತಿಗೆ ಮತ್ತು ಅಣ್ಣನ

ಸಿಸಿ ಸಂಖ್ಯೆ: 1161/2024

ಜೊತೆ ಗಲಾಟೆ ಮಾಡಿ, ನಮಗೆ ಅವಾಚ್ಯ ಶಬ್ದಗಳಿಂದ ಬೈದು, 1 ನೇ ಆರೋಪಿತ ಕಬ್ಬಿಣದ ನೀರಿನ ಪೈಪಿನಿಂದ ನನ್ನ ಅತ್ತಿಗೆಯ ಎಡಮುಂಗೈಗೆ ಹೊಡೆದು, 3 ನೇ ಆರೋಪಿತ ಕಲ್ಲಿನಿಂದ ನನ್ನ ಎಡಕಾಲಿಗೆ ಹೊಡೆದು, ಆರೋಪಿತರು ನನ್ನ ಅತ್ತಿಗೆಯನ್ನು ಹಿಡಿದು ಎಳೆದಾಡಿ ಅವಮಾನ ಪಡಿಸಿ, ಆರೋಪಿತರು ತಮ್ಮ ಕೈಗಳಿಂದ ನನ್ನ, ನನ್ನ ಅತ್ತಿಗೆಯ ಮತ್ತು ಅಣ್ಣನ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 28.03.2024 ರಂದು ನಾನು ಘಟನೆಯ ಕುರಿತು ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅದನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ.5 ಎಂದು ಗುರುತಿಸಲಾಯಿತು.

ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.**

**(ಹನುಮಂತ ಜಿ.ಹೆಚ್.)**
**1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ**